# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2671 |
| ವಿಧಾನಸಭೆ ಸದಸ್ಯರ ಹೆಸರು | : | ಶ್ರೀ ರಾಜೇಂದ್ರ ರಾಜಣ್ಣ |
| ಉತ್ತರಿಸುವ ದಿನಾಂಕ | : | 25-03-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು<br>ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾಗುವ ವಿದ್ಯಾರ್ಥಿ ವೇತನದ ಬಾಕಿ ಮೊತ್ತ ಎಷ್ಟು; (2020-21 ಮತ್ತು 2021-22 ವರ್ಷವಾರು ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ 2020-21 ಮತ್ತು 2021-22ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ವಿತರಿಸಲು ಬಾಕಿ ಇರುವ ವಿದ್ಯಾರ್ಥಿವೇತನದ ವಿವರ ಈ ಕೆಳಕಂಡಂತಿದೆ. |

| ವರ್ಷ | ವಿತರಿಸಲು ಬಾಕಿ ಇರುವ ವಿದ್ಯಾರ್ಥಿಗಳ ಸಂಖ್ಯೆ | ಮೊತ್ತ (ರೂ.ಕೋಟಿಗಳಲ್ಲಿ) |
|---|---|---|
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ | | |
| 2020-21 | 48,676 | 5.57 |
| 2021-22 | 2,62,630 | 32.77 |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | | |
| 2020-21 | 18,041 | 47.75 |
| 2021-22 | 2,05,433 | 389.19 |

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯವತಿಯಿಂದ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ ನೀಡಬೇಕಾದ ಬಾಕಿ ವಿದ್ಯಾರ್ಥಿವೇತನದ ವಿವರ ಈ ಕೆಳಕಂಡಂತಿದೆ.

| ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ವಿವರ | | | | |
|---|---|---|---|---|
| ಕ್ರ ಸಂ | ವರ್ಷ | ಸ್ವೀಕೃತಿ ಅರ್ಜಿಗಳ ಸಂಖ್ಯೆ. | ಮಂಜೂರು ಮಾಡಲಾದ ಅರ್ಜಿಗಳ ಸಂಖ್ಯೆ. | ಬಾಕಿ ಇರುವ ಅರ್ಜಿಗಳ ಸಂಖ್ಯೆ. |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) | | | | |
| 1. | 2020-21 | 333590 | 330744 | 8545 |
| 2. | 2021-22 | 331427 | 258986 | 4020 |
| ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 & 10) | | | | |
| 1. | 2020-21 | 82583 | 81527 | 666 |
| 2. | 2021-22 | 92742 | 72784 | 12768 |
| ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ | | | | |
| 1. | 2020-21 | 114437 | 111116 | 4060 |
| 2. | 2021-22 | 118724 | 66388 | 52336 |

| | | |
|---|---|---|
| ಆ) | ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಯಾವ ಕಾರಣದಿಂದ ಬಾಕಿ ಇದೆ; | **ಬಂದಿದೆ.**<br>ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಬಾಕಿ ಇರುವ ವಿದ್ಯಾರ್ಥಿವೇತನವನ್ನು ಸಕಾಲದಲ್ಲಿ ವಿದ್ಯಾರ್ಥಿಗಳಿಗೆ ಜಮೆ ಮಾಡಲು ಈ ಕೆಳಕಂಡ ಸವಾಲುಗಳನ್ನು ಎದುರಿಸಲಾಗುತ್ತಿದೆ.<br>• ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಸಂಬಂಧ ಶಿಕ್ಷಣ ಇಲಾಖೆಯ SATS Data ಮುಖಾಂತರ **ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್(SSP)**ಗೆ ನೇರವಾಗಿ ಮಾಹಿತಿ ಪಡೆಯಲಾಗುತ್ತಿದ್ದು, ಆ ಸಮಯಲ್ಲಿ ವಿದ್ಯಾರ್ಥಿಯ ಆಧಾರ್ ಕಾರ್ಡ್‌ನಲ್ಲಿ ನಮೂದಾಗಿರುವ ಹೆಸರಿಗೂ ಹಾಗೂ SATS Data ದಲ್ಲಿ ನಮೂದಾಗಿರುವ ಹೆಸರಿಗೂ ವ್ಯತ್ಯಾಸವಿದ್ದಲ್ಲಿ ಮಂಜೂರು ಮಾಡಲು ವಿಳಂಭವಾಗುತ್ತದೆ.<br>• ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಸಂಬಂಧ **ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್(SSP)** ತಂತ್ರಾಂಶದಲ್ಲಿ ವಿದ್ಯಾರ್ಥಿಯ ಶೈಕ್ಷಣಿಕ ದಾಖಲಾತಿಯಾದ Bonafide Details ಗಳು ಸಂಬಂಧಪಟ್ಟ ವಿಶ್ವವಿದ್ಯಾಲಯ/ಇಲಾಖೆಗಳಿಂದ ಸ್ವೀಕೃತವಾಗದೇ ಇರುವುದರಿಂದ ಹಾಗೂ ಕೋರ್ಸುವಾರು ನಿಗದಿಪಡಿಸಿದ ಶುಲ್ಕಗಳ ವಿವರಗಳನ್ನು ಸಂಬಂಧಪಟ್ಟ ಇಲಾಖೆ/ವಿಶ್ವವಿದ್ಯಾಲಯಗಳ ತಂತ್ರಾಂಶದಲ್ಲಿ Update ಮಾಡದೇ ಇರುವುದರಿಂದ ಅಂತಹ ಪ್ರಕರಣಗಳಲ್ಲಿ ವಿದ್ಯಾರ್ಥಿವೇತನ ಮಂಜೂರಾತಿ ಮಾಡಲು ವಿಳಂಭವಾಗುತ್ತದೆ.<br>ಮಂಜೂರಾದ ವಿದ್ಯಾರ್ಥಿವೇತನವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದ್ದು, ಸದರಿ ಪ್ರಕ್ರಿಯೆಗೆ ಆಧಾರ್ ಸೀಡಿಂಗ್ ಕಡ್ಡಾಯವಾಗಿರುತ್ತದೆ. |
| ಇ) | ಬಾಕಿ ಇರುವ ವಿದ್ಯಾರ್ಥಿ ವೇತನವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಈ ಸಂಬಂಧ, ಇಲಾಖೆಯಿಂದ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಂಡು ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ವಿದ್ಯಾರ್ಥಿವೇತನ ಮಂಜೂರು ಮಾಡಲು ಕ್ರಮವಹಿಸಲಾಗಿರುತ್ತದೆ.<br>• ಆಧಾರ್ ಸೀಡಿಂಗ್ ಸಂಬಂಧ ಮಾನ್ಯ ಮುಖ್ಯ ಕಾರ್ಯದರ್ಶಿಗಳು ಎಲ್ಲಾ ಜಿಲ್ಲಾಡಳಿತದೊಂದಿಗೆ ಹಾಗೂ ಲೀಡ್ ಬ್ಯಾಂಕ್ ಮ್ಯಾನೇಜರ್ಸ್‌ಗಳೊಂದಿಗೆ ಕಾಲಕಾಲಕ್ಕೆ ಸಭೆ ನಡೆಸಿ ಆಧಾರ್ ಸೀಡಿಂಗ್ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಕ್ರಮವಹಿಸಿರುತ್ತಾರೆ.<br>• ಸಮಾಜ ಕಲ್ಯಾಣ ಇಲಾಖೆಯಿಂದ ವಿದ್ಯಾರ್ಥಿವೇತನ ಅಭಿಯಾನ ನಡೆಸಿ ವಿದ್ಯಾರ್ಥಿಗಳು ಸರಿಯಾದ ರೀತಿಯಲ್ಲಿ ಅರ್ಜಿ ಸಲ್ಲಿಸಲು ಅರಿವು ಮೂಡಿಸಲಾಗಿರುತ್ತದೆ. |

| | | |
|---|---|---|
| | | • ಇ-ಆಡಳಿತ ಇಲಾಖೆಯು ಸಂಬಂಧಪಟ್ಟ ಕಾಲೇಜುಗಳಿಂದ ಶಾಲಾ ಶುಲ್ಕಗಳನ್ನು ಪಡೆಯಲು ಹಾಗೂ ಸದರಿ ಶುಲ್ಕಗಳನ್ನು ತಂತ್ರಾಂಶದಲ್ಲಿ ಅಳವಡಿಸಲು ದಿನಂಪ್ರತಿ ಉನ್ನತ ಶಿಕ್ಷಣ ಇಲಾಖೆಯೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ.<br>ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳ SATS ದತ್ತಾಂಶದಲ್ಲಿನ ವಿವರಗಳನ್ನು ನೇರವಾಗಿ SATS ತಂತ್ರಾಂಶದಿಂದ ಪಡೆದು ನ್ಯೂನ್ಯತೆಗಳನ್ನು ಸರಿಪಡಿಸಲಾಗುತ್ತಿದೆ. |

ಸಕಇ 263 ಪಕವಿ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.